ನಿ-72
ಕ್ರ-74
14ನೇ ಅಧಿವೇಶನ

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಹರೀಶ್ ಕುಮಾರ್ ರವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಯವರ ಉತ್ತರ.**

**ವಿಷಯ:** ದಕ್ಷಿಣ ಕನ್ನಡ ಜಿಲ್ಲೆಯ, ಪುತ್ತೂರು ತಾಲ್ಲೂಕಿನ ಹೃದಯ ಭಾಗದಲ್ಲಿರುವ ಉಪ್ಪಿನಂಗಡಿ ಪೇಟೆಯ ಮಾರುಕಟ್ಟೆ ಇತ್ಯಾದಿಗಳಿಂದ ತೆರೆದ ಚರಂಡಿಯಲ್ಲಿ ಕೊಳಚೆ ನೀರು ಹರಿಯುತ್ತಿದೆ. ಇದರಿಂದ ಈ ಪ್ರದೇಶದ ಸುತ್ತಮುತ್ತ ದುರ್ನಾತ ಬೀರುವುದಲ್ಲದೇ, ರೋಗರುಜಿನಗಳಿಗೆ ಕಾರಣವಾಗಿದೆ. ಸಾರ್ವಜನಿಕರ ಓಡಾಟಕ್ಕೂ ಸಹ ತುಂಬಾ ತೊಂದರೆಯಾಗಿದ್ದು, ಪ್ರಾಣ ಹಾನಿಯೂ ಸಂಭವಿಸಿರುತ್ತದೆ. ಆದುದರಿಂದ ಈ ತೆರೆದ ಚರಂಡಿಯ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆಯನ್ನು ಪರಿಣಾಮಕಾರಿಯಾಗಿ ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕಾಗಿದೆ ಎಂಬುದರ ಬಗ್ಗೆ.

*****

**ಉತ್ತರ:** ಪ್ರಸ್ತುತ ಗ್ರಾಮ ಪಂಚಾಯತ್ ಪೇಟೆ ವ್ಯಾಪ್ತಿಯ ತೆರೆದ ಚರಂಡಿಗೆ ದ್ರವ ತ್ಯಾಜ್ಯವನ್ನು ಬಿಡುತ್ತಿರುವ ಎಲ್ಲಾ ವಾಣಿಜ್ಯ ಮತ್ತು ವಸತಿ ಸಂಕೀರ್ಣದ ಮಾಲೀಕರಿಗೆ ನೋಟೀಸನ್ನು ಜಾರಿಗೊಳಿಸಲಾಗಿದ್ದು, ತಮ್ಮ ಹಂತದಲ್ಲಿ ವ್ಯವಸ್ಥಿತವಾಗಿ ಮತ್ತು ವೈಜ್ಞಾನಿಕವಾಗಿ ದ್ರವ ತ್ಯಾಜ್ಯವನ್ನು ನಿರ್ವಹಿಸಲು ಸೂಚಿಸಲಾಗಿರುತ್ತದೆ. ಅದರಂತೆ ಕೆಲವು ವಾಣಿಜ್ಯ ಮತ್ತು ವಸತಿ ಸಂಕೀರ್ಣಗಳು ವ್ಯವಸ್ಥೆಯನ್ನು ಕಲ್ಪಿಸಿಕೊಂಡಿರುತ್ತವೆ. ಸಮರ್ಪಕವಾಗಿ ದ್ರವ ತ್ಯಾಜ್ಯವನ್ನು ನಿರ್ವಹಣೆಯನ್ನು ಮಾಡದಿರುವ ಮಾಲೀಕರಿಗೆ ದಂಡ ವಿಧಿಸಲಾಗುತ್ತಿದೆ. ಇದೀಗ ಚರಂಡಿಯನ್ನು ಪಂಚಾಯತ್‌ನಿಂದ ಶುಚಿಗೊಳಿಸಿ ಕ್ಲೋರಿನ್ ಹಾಕಲಾಗುತ್ತಿದೆ.

ಉಪ್ಪಿನಂಗಡಿ ಗ್ರಾಮ ಪಂಚಾಯತ್‌ಗೆ ಸ್ವಚ್ಛ ಭಾರತ್ ಮಿಷನ್ (ಗ್ರಾ) ಹಂತ–2 ರಲ್ಲಿ ದ್ರವ ತ್ಯಾಜ್ಯ ನಿರ್ವಹಣೆಗೆ ಅನುದಾನ ಲಭ್ಯವಿಲ್ಲದಿರುವುದರಿಂದ ನರೇಗಾ ಮತ್ತು 15ನೇ ಹಣಕಾಸು ನಿರ್ಬಂದಿತ ಅನುದಾನ ಬಳಸಿ ವೈಯುಕ್ತಿಕ ಮತ್ತು ಸಮುದಾಯ ಇಂಗು ಗುಂಡಿ ನಿರ್ಮಿಸಲು ಕ್ರಮ ವಹಿಸಲಾಗುತ್ತಿದೆ.

ಉಪ್ಪಿನಂಗಡಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಪೇಟೆ ಪ್ರದೇಶದಲ್ಲಿ ಈ ಹಿಂದೆ ನಿರ್ಮಿಸಿರುವ ವಸತಿ ಸಮುಚ್ಚಯಗಳು ಎಸ್.ಟಿ.ಪಿ. ಅಳವಡಿಸಿದ ಕಾರಣ ಈ ಸಮಸ್ಯೆ ಉದ್ಭವಿಸಿದ್ದು, ಈಗಾಗಲೇ ಸದರಿ ಕಟ್ಟಡಗಳ ಮಾಲೀಕರಿಗೆ ನೋಟೀಸ್ ನೀಡಿ ಅಗತ್ಯ ಕ್ರಮ ವಹಿಸಲಾಗುತ್ತಿದೆ.

ಸಂಖ್ಯೆ: ಗ್ರಾಅಪ 320 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ